ಕರ್ನಾಟಕ ವಿಧಾನ ಪರಿಷತ್ತು

1	ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	401
2	ಸದಸ್ಯರ ಹೆಸರು	ಶ್ರೀ. ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ)
3	ಉತ್ತರಿಸುವ ದಿನಾಂಕ	18-02-2022
4	ಉತ್ತರಿಸುವವರು	ಮಾನ್ಯ ರೇಷ್ಮೆ ಹಾಗೂ ಯುವ ಸಬಲೀಕರಣ ಮತ್ತು ಕ್ರೀಡಾ ಸಚಿವರು

	ಪ್ರಶ್ನೆಗಳು	ಉತ್ತರಗಳು
ಅ	ರಾಜ್ಯದಲ್ಲಿ ಒಟ್ಟು ಎಷ್ಟು ಹೆಕ್ಟೇರ್ ಪ್ರದೇಶದಲ್ಲಿ ರೇಷ್ಮೆ ಬೆಳೆಯಲಾಗುತ್ತಿದೆ:	ರಾಜ್ಯದಲ್ಲಿ ಜನವರಿ-2022 ರ ಅಂತ್ಯಕ್ಕೆ ಒಟ್ಟು 111813.67 ಹೆಕ್ಟೇರ್ ಪ್ರದೇಶದಲ್ಲಿ ರೇಷ್ಮೆ ಬೆಳೆಯನ್ನು ಬೆಳೆಯಲಾಗುತ್ತಿದೆ.
ಆ	ರಾಜ್ಯದಲ್ಲಿ ರೇಷ್ಮೆ ಬೆಳೆ ಕುಂಠಿತವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ:	ರಾಜ್ಯದಲ್ಲಿ ಕಳೆದ ಮೂರು ವರ್ಷಗಳ ಹಿಪ್ಪುನೇರಳೆ ವಿಸ್ತೀರ್ಣದ ವಿವರ ಕೆಳಕಂಡಂತಿರುತ್ತದೆ. **ಆರ್ಥಿಕ ವರ್ಷ** — **ಹಿಪ್ಪುನೇರಳೆ ವಿಸ್ತೀರ್ಣ(ಹೆಕ್ಟೇರ್‌ಗಳಲ್ಲಿ)** 2019-20 — 106384.30 2020-21 — 107543.57 2021-22 — 111813.67 (ಜನವರಿ-2022ರ ಅಂತ್ಯಕ್ಕೆ) ಮೇಲ್ಕಂಡ ಅಂಕಿ ಅಂಶಗಳನ್ನು ಗಮನಿಸಿದಾಗ ರೇಷ್ಮೆ ಬೆಳೆ ಕುಂಠಿತವಾಗಿರುವುದಿಲ್ಲ.
ಇ	ಹಾಗಿದ್ದಲ್ಲಿ ಇದಕ್ಕೆ ಕಾರಣಗಳೇನು: (ವಿವರ ನೀಡುವುದು)	ಅನ್ವಯಿಸುವುದಿಲ್ಲ
ಈ	ರೇಷ್ಮೆ ಬೇಸಾಯವನ್ನು ವಿಸ್ತರಿಸಲು ಸರ್ಕಾರ ಕೈಗೊಂಡಿರುವ ಯೋಜನೆಗಳೇನು: (ರೂಪು ರೇಷೆಗಳ ಮಾಹಿತಿ ನೀಡುವುದು)	ರೇಷ್ಮೆ ಬೇಸಾಯವನ್ನು ವಿಸ್ತರಿಸಲು ಅನುಷ್ಠಾನಗೊಳಿಸುತ್ತಿರುವ ಕಾರ್ಯಕ್ರಮಗಳ ವಿವರ ಕೆಳಕಂಡಂತಿದೆ. 1. ಸುಧಾರಿತ ಹಿಪ್ಪುನೇರಳೆ ತೋಟ ಬೆಳೆಯಲು, ನರ್ಸರಿ ಬೆಳೆಸಲು ಸಹಾಯಧನ ಹಾಗೂ ತಾಂತ್ರಿಕ ಮಾಹಿತಿ ಒದಗಿಸಲಾಗುತ್ತಿದೆ. 2. ಹಿಪ್ಪುನೇರಳೆ ತೋಟಕ್ಕೆ ಟ್ರಂಚಿಂಗ್ – ಮಲ್ಚಿಂಗ್ ಮಾಡಲು ಸಹಾಯಧನ ಹಾಗೂ ತಾಂತ್ರಿಕ ಮಾಹಿತಿ. 3. ಹಿಪ್ಪುನೇರಳೆ ತೋಟಕ್ಕೆ ಹನಿ ನೀರಾವರಿ ಅಳವಡಿಕೆಗೆ ಶೇ.90ರಷ್ಟು ಸಹಾಯಧನ. 4. ಹಿಪ್ಪುನೇರಳೆ ತೋಟದ ಮಣ್ಣಿನ ಫಲವತ್ತತೆಗಾಗಿ ಜೈವಿಕಗೊಬ್ಬರ ಬಳಕೆಗೆ ಸಹಾಯಧನ. 5. ಹಿಪ್ಪುನೇರಳೆ ಮರ ಕೃಷಿ ಪದ್ಧತಿ ಉತ್ತೇಜನಕ್ಕಾಗಿ ಸಹಾಯಧನ. 6.

		1. ರೇಷ್ಮೆ ಹುಳು ಸಾಕಾಣಿಕೆ ಮನೆ/ಮೌಂಟಿಂಗ್ ಹಾಲ್ ನಿರ್ಮಾಣಕ್ಕೆ ಸಹಾಯಧನ. 2. ಸೋಂಕು ನಿವಾರಕಗಳ ಪೂರೈಕೆ ಮತ್ತು ಸಲಕರಣೆಗಳಿಗೆ ಸಹಾಯಧನ ಹಾಗೂ ತಾಂತ್ರಿಕ ಮಾಹಿತಿ. 3. ದ್ವಿತಳಿ ಚಾಕಿ ವೆಚ್ಚಕ್ಕೆ ಸಹಾಯಧನ. 4. ಚಾಕಿ ಸಾಕಾಣಿಕಾ ಕೇಂದ್ರದ ಸ್ಥಾಪನೆಗೆ / ಸಲಕರಣೆಗಳಿಗೆ ಖರೀದಿಗೆ ಸಹಾಯಧನ. 5. ನೂತನ ತಾಂತ್ರಿಕತೆಗಳ ಅಳವಡಿಕೆಗೆ ರೈತರಿಗೆ ತರಬೇತಿ ಮತ್ತು ಕಾರ್ಯಾಗಾರ. 6. ರೇಷ್ಮೆ ಗೂಡಿನ ಧಾರಣೆ ಕುಸಿತ ಸಂದರ್ಭದಲ್ಲಿ ರೇಷ್ಮೆ ಬೆಳೆಗಾರರಿಗೆ ರಕ್ಷಣಾತ್ಮಕ ದರ ನೀಡಲಾಗುತ್ತಿದೆ. 7. ದ್ವಿತಳಿ ಬಿತ್ತನೆ ಬೆಳೆಗಾರರು ಹಾಗೂ ಮೈಸೂರು ಬಿತ್ತನೆ ಬೆಳೆಗಾರರು ಬೆಳೆಯುವ ಬಿತ್ತನೆ ಗೂಡಿಗೆ ಪ್ರೋತ್ಸಾಹಧನ / ಬೋನಸ್ ನೀಡಲಾಗುತ್ತಿದೆ. 8. ರೇಷ್ಮೆ ಬಿತ್ತನೆ ಬೆಳೆಗಾರರಿಗೆ ಉತ್ಪಾದಕತೆ ಮತ್ತು ಗುಣಮಟ್ಟ ಆಧರಿಸಿ ಬಿತ್ತನೆ ಗೂಡಿಗೆ ಪ್ರೋತ್ಸಾಹಧನ ನೀಡಲಾಗುತ್ತಿದೆ. 9. ಮೈಸೂರು ಬಿತ್ತನೆ ಪ್ರದೇಶದ ಬೆಳೆಗಾರರಿಗೆ ಬಿದರಿನ ಚಂದ್ರಿಕೆಗಳ ಸರಬರಾಜು 10. ಉತ್ತರ ಕರ್ನಾಟಕ ಜಿಲ್ಲೆಗಳಲ್ಲಿ ಉತ್ಪಾದಿಸುವ ದ್ವಿತಳಿ ರೇಷ್ಮೆ ಗೂಡಿಗೆ ಕೆ.ಜಿ.ಗೆ ರೂ.10/-ರಂತೆ ಸಾಗಾಣಿಕೆ ವೆಚ್ಚ ನೀಡಲಾಗುತ್ತಿದೆ. ಮುಂದುವರೆದು, ಮಹಾತ್ಮ ಗಾಂಧಿ ರಾಷ್ಟ್ರೀಯ ಉದ್ಯೋಗ ಖಾತ್ರಿ ಯೋಜನೆಯಡಿ ಹಿಪ್ಪುನೇರಳೆ ನರ್ಸರಿ / ತೋಟ ಸ್ಥಾಪನೆ, ತೋಟ ನಿರ್ವಹಣೆ ಮತ್ತು ಹಿಪ್ಪುನೇರಳೆ ಮರ ಕೃಷಿ ಪದ್ಧತಿ ಸ್ಥಾಪನೆ ಹಾಗೂ ನಿರ್ವಹಣೆ ಚಟುವಟಿಕೆಗಳನ್ನು ಹಮ್ಮಿಕೊಳ್ಳಲಾಗಿದ್ದು, ರೈತರಿಗೆ ಕೂಲಿ/ಸಾಮಗ್ರಿ ವೆಚ್ಚವನ್ನು ಭರಿಸುವ ಮೂಲಕ ಗ್ರಾಮೀಣ ಪ್ರದೇಶದಲ್ಲಿ ಉದ್ಯೋಗವಕಾಶವನ್ನು ಕಲ್ಪಿಸಿ ಆರ್ಥಿಕ ಸದೃಢತೆಯನ್ನು ಒದಗಿಸುವ ಯೋಜನೆ.
ಉ	ಎಷ್ಟು ಹೆಕ್ಟೇರ್ ಪ್ರದೇಶದಲ್ಲಿ ವಿಸ್ತರಿಸಲು ಸರ್ಕಾರ ಗುರಿ ಹೊಂದಿದೆ?	ರಾಜ್ಯದಲ್ಲಿ ಪ್ರತಿ ವರ್ಷ 6500 ಹೆಕ್ಟೇರ್ ಪ್ರದೇಶದಲ್ಲಿ ರೇಷ್ಮೆ ವಿಸ್ತರಿಸಲು ಸರ್ಕಾರ ಗುರಿ ಹೊಂದಿದೆ.

ಸಂಖ್ಯೆ:ರೇಷ್ಮೆ 25 ರೇಕೃವಿ 2022

(ಡಾ. ನಾರಾಯಣಗೌಡ)
ರೇಷ್ಮೆ ಹಾಗೂ ಯುವ ಸಬಲೀಕರಣ